# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಗುರುವಾರ, ದಿನಾಂಕ:13ನೇ ಜುಲೈ, 2023

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

### 02. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

"2023ನೇ ಜುಲೈ, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:05.07.2023ರಂದು **ಶ್ರೀ ಯು.ಬಿ. ವೆಂಕಟೇಶ್** ರವರು ಸೂಚಿಸಿ **ಶ್ರೀ ಎಂ. ನಾಗರಾಜು** ಅವರು ಅನುಮೋದಿಸಿರುವ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

**ಆರನೇ ದಿನ**

### 03. ಗಮನ ಸೆಳೆಯುವ ಸೂಚನೆಗಳು

01 **ಶ್ರೀ ಯು.ಬಿ. ವೆಂಕಟೇಶ್** ಅವರು ಬೆಂಗಳೂರು ನಗರದ ಕತ್ರಿಗುಪ್ಪೆ ಗ್ರಾಮದ ಸರ್ವೆ ನಂ.15/1ರಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಲಾದ ನಿವೇಶನವನ್ನು ಕೆಲವು ಭೂಗಳ್ಳರು ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಂಡು ಅತಿಕ್ರಮಿಸಿಕೊಂಡಿರುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02 **ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ** ಅವರು ಬೆಳಗಾವಿ ಜಿಲ್ಲೆಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಅಧೀನದಲ್ಲಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಬಿ.ಆರ್. ಅಂಬೇಡ್ಕರ್ ಹಾಗೂ ಇತರೆ ಸರ್ಕಾರಿ ವಸತಿ ಶಿಕ್ಷಣ ಶಾಲೆಗಳಲ್ಲಿ ಪ್ರೌಢ ಶಿಕ್ಷಣ ವ್ಯಾಸಂಗ ಮುಗಿಸಿದ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಪದವಿ ಪೂರ್ವ ಶಿಕ್ಷಣ ಪೂರೈಸಲು ಅನುವಾಗುವಂತೆ ಸದರಿ ವಸತಿ ಶಾಲೆಗಳನ್ನು ಉನ್ನತೀಕರಿಸುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

03 **ಶ್ರೀಮತಿ ಹೇಮಲತಾ ನಾಯಕ್** ಅವರು ರಾಜ್ಯದಲ್ಲಿ ಮುಂಗಾರು ಬೆಳೆಗೆ ನಿಗದಿತ ಮಳೆ ಪ್ರಮಾಣ ಆಗದಿರುವುದರಿಂದ ಮಳೆ ಆಶ್ರಿತ ಬಿತ್ತನೆ ಪ್ರಮಾಣ ಕಡಿಮೆ ಆಗಿರುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

01. **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯತ್‌ಗಳಲ್ಲಿ ದೈನಂದಿನ ಆಡಳಿತಾತ್ಮಕ ಸಮಸ್ಯೆಗಳು, ಪಂಚತಂತ್ರ ತಂತ್ರಾಂಶ ವ್ಯವಸ್ಥೆಯಲ್ಲಿರುವ ಲೋಪ ದೋಷಗಳು, ಸರ್ವರ್ ಸಮಸ್ಯೆ, ಸಿಬ್ಬಂದಿಗಳ ವೇತನ, ಇನ್ನಿತರೆ ಸಮಸ್ಯೆ ಹಾಗೂ ಬೇಡಿಕೆಗಳ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಮರಿತಿಬ್ಬೇಗೌಡ** ಅವರು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 2011ನೇ ಸಾಲಿನಲ್ಲಿ ನೇಮಕವಾಗಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳಿಗೆ ಪದೋನ್ನತಿಯನ್ನು ನೀಡದಿರುವ ಕುರಿತು ಪ್ರಸ್ತಾಪಿಸುವುದು.

03. **ಡಾ: ತೇಜಸ್ವಿನಿಗೌಡ** ಅವರು ಬೆಂಗಳೂರಿನ 'ಸೆಂಚುರಿ ಕ್ಲಬ್'ನ್ನು Park Zone (ಉದ್ಯಾನ ವಲಯ) ನಿಂದ ಕೈಬಿಡುವ ಕುರಿತು ಪ್ರಸ್ತಾಪಿಸುವುದು.

## 05. ಅರ್ಧ ಗಂಟೆ ಕಾಲಾವಧಿ ಚರ್ಚೆ

01. ಗೋಹತ್ಯೆ ನಿಷೇಧ ಕಾಯ್ದೆ-2020ನ್ನು ರದ್ದುಪಡಿಸುವ ಕುರಿತು ದಿನಾಂಕ:05.07.2023ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:27(104)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎನ್. ರವಿಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

02. ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ದಿನಾಂಕ:10.07.2023ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:67(499)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಶಶಿಲ್ ಜಿ. ನಮೋಶಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

3..

## 06. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಯುತರುಗಳಾದ:-**<br>**ಎಸ್.ಎಲ್.ಭೋಜೇಗೌಡ,**<br>**ಕೆ.ಎ. ತಿಪ್ಪೇಸ್ವಾಮಿ, ಬಿ.ಎಂ.ಫಾರೂಖ್,**<br>**ಗೋವಿಂದರಾಜು ಮತ್ತು ನಿರಾಣಿ**<br>**ಹಣಮಂತ ರುದ್ರಪ್ಪ ಹಾಗೂ ಇತರರು** | ಮಹದಾಯಿ, ಮೇಕೆದಾಟು ಮತ್ತು ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಗಳಿಗೆ ಅಗತ್ಯವಿರುವ ಅನುದಾನವನ್ನು ಆಯವ್ಯಯದಲ್ಲಿ ಒದಗಿಸದೇ ಇರುವುದರಿಂದ ನೀರಾವರಿ ಯೋಜನೆಗಳ ಅನುಷ್ಠಾನ ನೆನೆಗುದಿಗೆ ಬಿದ್ದಿರುವ ಕಾರಣದಿಂದ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರನ್ನು ನಿಗಧಿತ ಅವಧಿಯಲ್ಲಿ ಬಳಸಿಕೊಳ್ಳಲಾಗದೆ ರಾಜ್ಯದ ಜನತೆಗೆ ಅಪಾರ ನಷ್ಟವುಂಟಾಗಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**